## 30. ರೂ.8,722 ಕೋಟಿ ಮೌಲ್ಯದ ರಕ್ಷಣಾ ಸಾಮಗ್ರಿ ಖರೀದಿಗೆ ಒಪ್ಪಿಗೆ

ಭಾರತೀಯ ಸಶಸ್ತ್ರ ಪಡೆಗಳಿಗೆ ಹೆಚ್ಚಿನ ಉತ್ತೇಜನ ನೀಡುವ ಹಾಗೂ ಆತ್ಮನಿರ್ಭರ ಭಾರತದ ನಿರ್ಮಾಣದ ನಿಟ್ಟಿನಲ್ಲಿ ಬರೋಬ್ಬರಿ ರೂ.8,772.38 ಕೋಟಿಗಳ ರಕ್ಷಣಾ ಸಾಮಗ್ರಿಗಳ ಖರೀದಿ ಪ್ರಸ್ತಾಪಕ್ಕೆ ರಕ್ಷಣಾ ಖರೀದಿ ಮಂಡಳಿ (ಡಿಎಸಿ) ಒಪ್ಪಿಗೆ ನೀಡಿದೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನೇತೃತ್ವದಲ್ಲಿ ನಡೆದ ಡಿಎಸಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ವಿಶೇಷವೆಂದರೆ ಈ ಪೈಕಿ ಕೆಲಸವನ್ನು ಭಾರತೀಯ ಪಿಎಸ್‌ಯು (ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು)ಗಳಿಂದಲೇ ಖರೀದಿ ಮಾಡಲು ನಿರ್ಧರಿಸಲಾಗಿದೆ.

**ಎಚ್‌ಎಎಲ್, ಬಿಎಚ್‌ಇಎಲ್‌ನಿಂದ ಖರೀದಿ:** ಪ್ರಸ್ತಾವನೆಯ ಪ್ರಕಾರ ಭಾರತೀಯ ವಾಯುಪಡೆಗೆ ಅಗತ್ಯವಾಗಿರುವ 106 ತರಬೇತಿ ವಿಮಾನಗಳನ್ನು ಸರ್ಕಾರಿ ಸ್ವಾಮ್ಯದ ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್ (ಎಚ್‌ಎಎಲ್) ನಿಂದ ಖರೀದಿಸಲಾಗುತ್ತದೆ. ಈ ವಿಮಾನಗಳನ್ನು ವಾಯುಪಡೆಯ ಯೋಧರ ಆರಂಭಿಕ ತರಬೇತಿಗೆ ಬಳಸಲಾಗುತ್ತದೆ. ಅದೇ ರೀತಿ ಸೂಪರ್ ರ‍್ಯಾಪಿಡ್ ಗನ್ ಮೌಂಟ್ (ಎಸ್‌ಆರ್‌ಜಿಎಂ)ನ ಮೇಲ್ದರ್ಜೆಗೇರಿಸಿದ ಆವೃತ್ತಿಯನ್ನು ಬಿಎಚ್‌ಇಎಲ್‌ನಿಂದ ಖರೀದಿಸಲು ಡಿಎಸಿ ನಿರ್ಧರಿಸಿದೆ. ನೌಕಾಪಡೆ ಹಾಗೂ ಕರಾವಳಿ ರಕ್ಷಕ ಪಡೆಯ ಸಮರನೌಕೆಗಳಲ್ಲಿ ಇದನ್ನು ಅಳವಡಿಸಲಾಗುತ್ತದೆ. ಸೇನೆಗೆ ಅಗತ್ಯವಿರುವ 125 ಎಂಎಂ, ಎಪಿಎಫ್, ಎಸ್‌ಡಿಎಸ್ (ಆರ್ಮರ್ ಪಿಯರ್ಸಿಂಗ್ ಫಿನ್ ಸ್ಟೆಬಿಲೈಸ್ಡ್ ಡಿಸ್ಕಾರ್ಡಿಂಗ್ ಸ್ಯಾಬೋಟ್) ಖರೀದಿಗೂ ಒಪ್ಪಿಗೆ ನೀಡಿದೆ.

ಮೇಕ್ ಇನ್ ಇಂಡಿಯಾಗೆ ಆದ್ಯತೆ ನೀಡುವ ಸಲುವಾಗಿ 101 ರಕ್ಷಣಾ ಸಾಮಗ್ರಿಗಳ ಆಮದಿಗೆ ಕೇಂದ್ರ ಸರ್ಕಾರ ನಿರ್ಬಂಧ ಹೇರಿದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ. ರಕ್ಷಣಾ ಉತ್ಪಾದನೆಯಲ್ಲಿ ಭಾರತವು ಸ್ವಾವಲಂಬನೆ ಸಾಧಿಸಬೇಕೆಂಬ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಸಾಮಗ್ರಿಗಳಿಗೆ ನಿರ್ಬಂಧ ಹೇರಲಾಗುತ್ತದೆ ಎಂದು ಸಚಿವ ರಾಜನಾಥ್ ತಿಳಿಸಿದ್ದರು.

ಆಧಾರ:ಉದಯವಾಣಿ, ದಿನಾಂಕ:12.08.2020